## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ದಿನಾಂಕ:24.01.2014ರಂದು ನಡೆದ ರಾಜ್ಯ ಮಟ್ಟದ ಯೋಜನಾ ಮಂಜೂರಾತಿ ಸಮಿತಿ ಸಭೆಯಲ್ಲಿ ಅನುಮೋದನೆಯಾದ ಒಟ್ಟು 30 ಯೋಜನೆಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

ಓದಲಾಗಿದೆ:
1. ದಿನಾಂಕ:24.01.2014ರ ರಾಜ್ಯ ಮಟ್ಟದ ಯೋಜನಾ ಮಂಜೂರಾತಿ ಸಮಿತಿ (SLSSC) ಸಭೆಯ ನಡವಳಿಗಳು.
2. ದಿನಾಂಕ:10.02.2014ರ ರಾಜ್ಯ ಮಟ್ಟದ ಅಧಿಕಾರಯುಕ್ತ ಸಮಿತಿ (SLEC) ಸಭೆಯ ನಡವಳಿಗಳು.
3. ಮುಖ್ಯ ಇಂಜಿನಿಯರ್, PRED ರವರ ಪತ್ರ ಸಂ:ಮುಇಂ/ಪಂರಾಇಂಇ/ಕುನೀನೈ-1/ತಾಂಸ-1/ಸಇಂ-5/2013-14/ ದಿನಾಂಕ:25.02.2014

ಪೀಠಿಕೆ:

ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ವಿವಿಧ ರೀತಿಯ ಗುಣಮಟ್ಟದ ಬಾಧೆಗೊಳಗಾಗಿರುವ ಹಾಗೂ ನೀರು ಪೂರೈಕೆ ಪ್ರಮಾಣ ಕಡಿಮೆಯಿರುವ ಸಮಸ್ಯಾತ್ಮಕ ಜನವಸತಿಗಳಿಗೆ ಪರ್ಯಾಯ ಭೂಮಿಯ ಮೇಲ್ಮೈ ಜಲಮೂಲ ಆಧರಿಸಿ, ಸುರಕ್ಷಿತ ಕುಡಿಯುವ ನೀರು ಪೂರೈಕೆ ಮಾಡುವ ಸಲುವಾಗಿ ದಿನಾಂಕ:24.01.2014ರಂದು ನಡೆದ ರಾಜ್ಯ ಮಟ್ಟದ ಯೋಜನಾ ಮಂಜೂರಾತಿ ಸಮಿತಿ (SLSSC) ಸಭೆ ಹಾಗೂ ದಿನಾಂಕ:10.02.2014ರ SLEC ಸಭೆಯಲ್ಲಿ O&M ಬಾಬ್ತು ಸೇರಿದಂತೆ ಅನುಮೋದನೆ ನೀಡಲಾದ ರೂ.615.38ಕೋಟಿ ಅಂದಾಜು ಮೊತ್ತದ 10 ಜಿಲ್ಲೆಗಳ 30 ಯೋಜನೆಗಳನ್ನು ಆದ್ಯತೆ ಮೇಲೆ ಅನುಷ್ಠಾನಗೊಳಿಸುವ ಅಗತ್ಯತೆಯಿದೆ. ಮೇಲೆ (3)ರಲ್ಲಿ ಓದಲಾದ ಪತ್ರದಲ್ಲಿ CE/PRED ರವರು ಈ 30 MVS ಯೋಜನೆಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ಪ್ರಸ್ತಾವನೆ ಸಲ್ಲಿಸಿದ್ದಾರೆ. ಸದರಿ 30 ಕುಡಿಯುವ ನೀರಿನ ಯೋಜನೆಗಳಿಗೆ ಜಲಸಂಪನ್ಮೂಲ ಇಲಾಖೆಯ ಅನುಮತಿ ಕೋರಿ ಪ್ರಸ್ತಾವನೆ ಸಲ್ಲಿಸಲಾಗಿದೆ. ಚಾಲ್ತಿ ಪಾರದರ್ಶಕ ನೀತಿಯನ್ವಯ ನಿಯಮಾನುಸಾರ ಸಂಬಂಧಪಟ್ಟ ಜಿಲ್ಲಾ ಪಂಚಾಯಿತಿಗಳು ಹಾಗೂ ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ ಮುಂದಿನ ತಾಂತ್ರಿಕ ಅನುಮೋದನೆ ಹಾಗೂ ಟೆಂಡರ್ ಪ್ರಕ್ರಿಯೆ ಅನುಸರಿಸಬೇಕಾಗುವಂತೆ NRDWP (Coverage & WQ) ಕಾರ್ಯಕ್ರಮದಡಿ ಆಡಳಿತಾತ್ಮಕ ಅನುಮೋದನೆ ನೀಡಬೇಕಾಗಿದೆ. ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 36 ಗ್ರಾನೀಸ(5) 2014 ಬೆಂಗಳೂರು, ದಿನಾಂಕ:26.02.2014**

ಪೀಠಿಕೆಯಲ್ಲಿನ ಅಂಶಗಳನ್ನು ಪರಿಶೀಲಿಸಿ, ದಿನಾಂಕ:24.01.2014ರ SLSSC ಹಾಗೂ ದಿನಾಂಕ:10.02.2014ರ SLEC ಸಭೆಗಳಲ್ಲಿ O&M ಬಾಬ್ತು ಸೇರಿದಂತೆ ತಾತ್ವಿಕ ಒಪ್ಪಿಗೆ ಪಡೆದಿರುವ ಬಿಜಾಪುರ, ಬಾಗಲಕೋಟೆ, ರಾಯಚೂರು, ಬೆಳಗಾವಿ, ಗುಲ್ಬರ್ಗಾ, ದಾವಣಗೆರೆ, ದಕ್ಷಿಣ ಕನ್ನಡ, ಮಂಡ್ಯ, ಮೈಸೂರು ಮತ್ತು ಉಡುಪಿ ಜಿಲ್ಲೆಗಳ ರೂ.615.38ಕೋಟಿ (ಆರು ನೂರು ಹದಿನೈದು ಕೋಟಿ ಮುವತ್ತೆಂಟು ಲಕ್ಷ ರೂಪಾಯಿಗಳು ಮಾತ್ರ) ಅಂದಾಜಿನ ಅನುಬಂಧದಲ್ಲಿ ತೋರಿರುವ 30 ಪ್ರತ್ಯೇಕ ಬಹುಗ್ರಾಮ ಕುಡಿಯುವ ನೀರಿನ ಯೋಜನೆಗಳಿಗೆ, ಈ ಆದೇಶಕ್ಕೆ ಲಗತ್ತಿಸಿರುವ ಆಯಾಯ ಯೋಜನೆಗಳ ಅಂದಾಜು ಘೋಷ್ವಾರೆಯನ್ವಯ NRDWP (Coverage & WQ)ಕಾರ್ಯಕ್ರಮದಡಿ ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

2. ಈ ಆಡಳಿತಾತ್ಮಕ ಅನುಮೋದನೆ ಮತ್ತು ಅನುದಾನ ವಿನಿಯೋಗ ಕೆಳಕಂಡ ಷರತ್ತುಗಳಿಗೊಳಪಟ್ಟಿರುತ್ತದೆ:

(ಅ) ಜಲಸಂಪನ್ಮೂಲ ಇಲಾಖೆಯಿಂದ ಅವಶ್ಯವಿರುವ ಸಹಮತಿ ಪಡೆದು ನಂತರ ಕಾಮಗಾರಿ ಅನುಷ್ಠಾನ ಪ್ರಕ್ರಿಯೆ ಆರಂಭಿಸಬೇಕು.

(ಆ) ಅನುಮೋದಿತ ಕುಡಿಯುವ ನೀರಿನ ಕಾರ್ಯಕ್ರಮದ ವ್ಯಾಪ್ತಿಗೆ ಬರುವ ಗ್ರಾಮ / ಜನವಸತಿಗಳು ಮತ್ತ್ಯಾವುದೇ ಕಾರ್ಯಕ್ರಮ ಯೋಜನೆಗಳಡಿ ಸೇರ್ಪಡೆಯಾಗಿರಬಾರದು.

(ಇ) ಈ ಆದೇಶದಡಿ ಅನುಮೋದನೆಯಾದ ಯೋಜನೆಗಳಿಗೆ ಅಂದಾಜು ಮೊತ್ತದ ವ್ಯಾಪ್ತಿಯೊಳಗೆ CE/PRED ದೃಢೀಕರಿಸಿದ ತಾಂತ್ರಿಕ ಅನುಮೋದನೆಯನ್ವಯ ಪ್ರಗತಿ ಆಧರಿಸಿ ಅನುದಾನ ಬಿಡುಗಡೆಯಾಗಲಿದೆ. ಇವುಗಳಿಗಾಗಿ 2013-14ರ NRDWPಡಿ ಒದಗಿಸಿರುವ ಅನುದಾನದಿಂದ ಯೋಜನೆಗಳನ್ನು ಅನುಷ್ಠಾನಗೊಳಿಸಬೇಕು. ಅಗತ್ಯವಿರುವ / ಬಾಕಿಯಿರುವ ಅನುದಾನವನ್ನು 2014-15ರ ಸಾಲಿನಲ್ಲಿ ಒದಗಿಸಿಕೊಳ್ಳಬೇಕು.

(ಈ) ಯೋಜನಾ ಅನುಷ್ಠಾನವನ್ನು ಚಾಲ್ತಿ ಪಾರದರ್ಶಕ (KTPP ಅಧಿನಿಯಮದನ್ವಯ) ನೀತಿಯನ್ವಯವೇ ಮಾಡತಕ್ಕದ್ದು ಮತ್ತು ಯೋಜನೆಯ ಅನುಷ್ಠಾನವನ್ನು ಕಡ್ಡಾಯವಾಗಿ ಸರ್ಕಾರದಿಂದ ಅನುಮೋದನೆಯಾಗುವ ಸಂಸ್ಥೆ ಮೂಲಕ 3rd Party Inspectionಗೆ ಒಳಪಡಿಸುವುದು.

(ಉ) ಈ ಯೋಜನೆಯ ಬಂಡವಾಳ ವೆಚ್ಚವು (DBOT ಪದ್ಧತಿ ಹೊರತಾದ ಯೋಜನೆಗಳಿಗೆ) ಕೇಂದ್ರ ಮತ್ತು ರಾಜ್ಯ ವಲಯದ NRDWP ಯೋಜನೆಯಡಿ ಕ್ರಮವಾಗಿ 50:50 ಅನುಪಾತದಲ್ಲಿರುತ್ತದೆ.

(ಊ) ರೂ.25ಕೋಟಿಗೂ ಮಿಗಿಲಾದ ಯೋಜನೆಗಳ ಅನುಷ್ಠಾನ ಸಲುವಾಗಿ DBOT ನೀತಿಯನ್ನು CE/PRED ರವರು ಸಿದ್ಧಪಡಿಸಿರುವ ToR ಪ್ರಕಾರ ಅನುಸರಿಸಲು ಕ್ರಮವಹಿಸತಕ್ಕದ್ದು. ಈ ನೀತಿಯನ್ವಯ ಸೂಕ್ತ ಗುತ್ತಿಗೆದಾರರು ದೊರಕದಿದ್ದಲ್ಲಿ KTPP ಕಾಯ್ದೆಯನ್ವಯ ಯೋಜನೆಯ ಅನುಷ್ಠಾನಕ್ಕೆ ವಿಳಂಬ ಮಾಡದೆ ಕ್ರಮ ಜರುಗಿಸಬೇಕು.

(ಋ) ಈ ಯೋಜನೆಗೆ ತಗಲುವ ಅನುಮೋದಿತ ಅಂದಾಜು ವೆಚ್ಚದ ವ್ಯಾಪ್ತಿಯೊಳಗೆ ಗುತ್ತಿಗೆ ನೀಡಿದ 11 ತಿಂಗಳೊಳಗಾಗಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸಿ ಯೋಜನೆಯನ್ನು ಕಾರ್ಯಗತಗೊಳಿಸತಕ್ಕದ್ದು. ಈಗ ಅನುಮೋದನೆಯಾದ ಕ್ರಿಯಾ ಯೋಜನೆಯ ಅಂದಾಜು ವೆಚ್ಚದಲ್ಲಿ ಹೆಚ್ಚಳವಾಗದಂತೆ ಎಲ್ಲಾ ಆಡಳಿತಾತ್ಮಕ ಹಾಗೂ ತಾಂತ್ರಿಕ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳತಕ್ಕದ್ದು.

(ಎ) Bulk Water meter ಹಾಗೂ 100% ಮನೆ ನಳ ನೀರು ಸಂಪರ್ಕ ಮೀಟರ್‌ಗಳ ವ್ಯವಸ್ಥೆಯನ್ನು MVS ಯೋಜನೆಗಳಿರುವೆಡೆ ಕಡ್ಡಾಯವಾಗಿ ಮಾಡಬೇಕು. ಆಯಾ ಗ್ರಾಮ ಪಂಚಾಯತಿ ಸದರಿ ನೀರಿನ ಸರಬರಾಜು ಪ್ರಮಾಣದ ಆಧಾರದ ಮೇಲೆ ಹೊರಗುತ್ತಿಗೆ ಸಂಸ್ಥೆಗೆ / ನಿರ್ವಹಣಾ ಸಂಸ್ಥೆಗೆ ನೀರು ಬಳಕೆ ಆಧಾರದ ಮೇಲೆ ನೀರಿನ ಕರ ಪಾವತಿಸಬೇಕು.

(ಏ) ಯೋಜನೆಗಳು ಅನುಷ್ಠಾನಗೊಂಡ ನಂತರ ಅವುಗಳ ಕಾರ್ಯಾಚರಣೆ ಮತ್ತು ನಿರ್ವಹಣೆಯ ಸಂಪೂರ್ಣ ಜವಾಬ್ದಾರಿಯನ್ನು ಹೊರಗುತ್ತಿಗೆ ಆಧಾರದ ಮೇಲೆ (ಆದೇಶ ಸಂಖ್ಯೆ: ಗ್ರಾಅಪ 12 ಗ್ರಾನೀಸ(4) 2011(ಭಾ) ದಿನಾಂಕ:12.03.2013)ವಹಿಸಬೇಕು ಹಾಗೂ ಗ್ರಾಮಗಳ ಆಂತರಿಕ ಸರಬರಾಜು ವ್ಯವಸ್ಥೆಯನ್ನು ಸ್ಥಳೀಯ ಗ್ರಾಮ ನೀರು ಮತ್ತು ನೈರ್ಮಲ್ಯ ಸಮಿತಿ (VWSSC)/ ಸಂಬಂಧಿಸಿದ ಗ್ರಾಮ ಪಂಚಾಯತ್ / ಪಾರದರ್ಶಕ ನೀತಿಯನ್ವಯ ಆಯ್ಕೆ ಮಾಡಿದ ಸರ್ಕಾರೇತರ ಸಂಸ್ಥೆ / ಸಂಬಂಧಪಟ್ಟ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ಮುಖೇನ ಸದರಿ ಗ್ರಾಮ ಪಂಚಾಯತ್ ಠರಾವು ಆಧರಿಸಿ ಸೂಕ್ತ ವ್ಯವಸ್ಥೆ ಮಾಡತಕ್ಕದ್ದು.

(ಐ) ಸರ್ಕಾರದ ನೀತಿಯನ್ವಯ ಮನೆ ಸಂಪರ್ಕ ಮತ್ತು ಸ್ಟ್ಯಾಂಡ್ ಪೋಸ್ಟ್‌ಗಳಿಗೆ ಕಲ್ಪಿಸಿರುವ ಸಂಪರ್ಕದನ್ವಯ ನಿರ್ವಹಣೆ ವೆಚ್ಚಕ್ಕನುಗುಣವಾಗಿ ಅಗತ್ಯ ನೀರಿನ ಶುಲ್ಕ ಸಂಗ್ರಹಿಸತಕ್ಕದ್ದು ಹಾಗೂ ಮನೆ ಸಂಪರ್ಕಕ್ಕೆ ನೀರಿನ ಶೇಖರಣೆಯನ್ನು ಗ್ರಾಮ ಪಂಚಾಯತ್ ಠರಾವಿನನ್ವಯ ಹಾಗೂ ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 128 ಗ್ರಾನೀಸ(4)13 ದಿನಾಂಕ:29.08.2013ರನ್ವಯ ಸಂಗ್ರಹಿಸುವುದು.

(ಒ) ನೀರೆತ್ತುವ ಪ್ರಮಾಣವನ್ನು ಸೂಕ್ತ ರೀತಿಯಲ್ಲಿ ಅಳತೆ ಮಾಡುವ ಸಲುವಾಗಿ ಅಗತ್ಯ ಮಾಪಕವನ್ನು ನದಿಯ ಹತ್ತಿರ / ಜಲಾಶಯದ ಬಳಿ ಅಳವಡಿಸಿಕೊಳ್ಳತಕ್ಕದ್ದು ಹಾಗೂ ತತ್ಸಂಬಂಧದ ವಿದ್ಯುತ್ ವೆಚ್ಚವನ್ನು ಸ್ಥಳೀಯ ಪಂಚಾಯತ್ ಭರಿಸಬೇಕು.

3. ಈ ಆದೇಶವನ್ನು ಆರ್ಥಿಕ ಇಲಾಖೆ ಸಹಮತಿ ಸಂಖ್ಯೆ: ಆಇ/43/ವೆಚ್ಚ-6/2013, ದಿನಾಂಕ:15.02.2013 ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ IFAರವರು ಯೋಜನೆಗಳ ಮುಂದುವರಿಕೆಗೆ ಹೊರಡಿಸಿರುವ ಆದೇಶ ಸಂಖ್ಯೆ: ಗ್ರಾಅಪ 58 ಎಫ್‌ಎಫ್ 2012 ದಿ:01.04.2013ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ರಾಮಕೃಷ್ಣ)
ಸರ್ಕಾರದ ಉಪ ಕಾರ್ಯದರ್ಶಿ(ಗ್ರಾನೀಸ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ
ಇಮೇಲ್: ds3452000@yahoo.co.in
ದೂರವಾಣಿ:22032806, ಫ್ಯಾಕ್ಸ್:22203175

ಪ್ರತಿಗಳು:
1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು
2. ಮಹಾಲೇಖಪಾಲರು (ಎಯು-I) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಎಯು-2) ಕರ್ನಾಟಕ, ಬೆಂಗಳೂರು.
4. ಉಪ ಮಹಾಲೇಖಪಾಲರು, ಮಹಾಲೇಖಪಾಲರು(ಎಯು-I)ರವರ ಶಾಖಾ ಕಛೇರಿ, ಜಲೇಬು ರಸ್ತೆ, ಧಾರವಾಡ.

5. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು-1.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ ಬೆಂ.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಲೋಕೋಪಯೋಗಿ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂ.
9. ವಿಶೇಷಾಧಿಕಾರಿಗಳು(ಬಜೆಟ್)ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿಗಳು,ಆರ್ಥಿಕ ಇಲಾಖೆ, ವಿಧಾನಸೌಧ ಬೆಂ.
10. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ (6) (ಬಜೆಟ್) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
11. ಮುಖ್ಯ ಇಂಜಿನಿಯರ್, ಪಂಚಾಯತ್‌ರಾಜ್ ಇಂಜಿನಿಯರಿಂಗ್ ಇಲಾಖೆ, 2ನೇ ಮಹಡಿ, ಗ್ರಾಮೀಣಾಭಿವೃದ್ಧಿ ಭವನ ಆನಂದರಾವ್ ವೃತ್ತ ಬೆಂಗಳೂರು-09.
12. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನಗರ ನೀರು ಸರಬರಾಜು ಒಳಚರಂಡಿ ಮಂಡಳಿ, ನಂ.5 ಮತ್ತು 6, ಜಲಭವನ, ಬಿಟಿಎಂ ಲೇಔಟ್, 1ನೇ ಘಟ್ಟ, 1ನೇ ಹಂತ, ಬನ್ನೇರುಘಟ್ಟ ಮುಖ್ಯರಸ್ತೆ, ಬೆಂ-29.
13. ಅಧ್ಯಕ್ಷರು, ಜಿಲ್ಲಾ ಪಂಚಾಯತ್, ಬಿಜಾಪುರ, ಬಾಗಲಕೋಟೆ, ಗುಲ್ಬರ್ಗಾ, ದಾವಣಗೆರೆ, ರಾಯಚೂರು, ಬೆಳಗಾವಿ, ದಕ್ಷಿಣ ಕನ್ನಡ, ಮಂಡ್ಯ, ಮೈಸೂರು ಮತ್ತು ಉಡುಪಿ.
14. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯತ್, ಬಿಜಾಪುರ, ಬಾಗಲಕೋಟೆ, ಗುಲ್ಬರ್ಗಾ, ದಾವಣಗೆರೆ, ರಾಯಚೂರು, ಬೆಳಗಾವಿ, ದಕ್ಷಿಣ ಕನ್ನಡ, ಮಂಡ್ಯ, ಮೈಸೂರು ಮತ್ತು ಉಡುಪಿ.
15. ಅಧೀಕ್ಷಕ ಅಭಿಯಂತರರು ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ ಕಛೇರಿ, ಬೆಳಗಾಂ, ದಾವಣಗೆರೆ, ಗುಲ್ಬರ್ಗಾ, ಮೈಸೂರು, ಬಳ್ಳಾರಿ ಮತ್ತು ಮಂಗಳೂರು.
16. ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಬಿಜಾಪುರ, ಬಾಗಲಕೋಟೆ, ಗುಲ್ಬರ್ಗಾ, ದಾವಣಗೆರೆ, ರಾಯಚೂರು, ಬೆಳಗಾವಿ, ದಕ್ಷಿಣ ಕನ್ನಡ, ಮಂಡ್ಯ, ಮೈಸೂರು ಮತ್ತು ಉಡುಪಿ.
17. ಮುಖ್ಯ ಲೆಕ್ಕಾಧಿಕಾರಿಗಳು, ಮುಖ್ಯ ಇಂಜಿನಿಯರ್‌ರ ಕಛೇರಿ, PRED, ಬೆಂಗಳೂರು-09.
18. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್ ಸಾಬ್‌ರವರ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು.
19. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ ಕಾರ್ಯದರ್ಶಿ (ಪಂ.ರಾಜ್) ಇವರ ಆಪ್ತ ಕಾರ್ಯದರ್ಶಿ.
20. ನಿರ್ದೇಶಕರು KRWSSA ಮತ್ತು ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ/ ಅಪರ ನಿರ್ದೇಶಕರು, (ಆರ್ಥಿಕ) KRWSSA/SWSM ಆಂತರಿಕ ಆರ್ಥಿಕ ಸಲಹೆಗಾರರು, RDPR ಇಲಾಖೆ, ಇವರುಗಳ ಆಪ್ತ ಸಹಾಯಕರು.
21. ಮ್ಯಾನೇಜರ್ ಸಿಂಡಿಕೇಟ್ ಬ್ಯಾಂಕ್, BWSSB Branch, ರಾಜದೂತ್ ಕಾಂಪ್ಲೆಕ್ಸ್, ಅವೆನ್ಯೂರಸ್ತೆ, ಬೆಂಗಳೂರು.
22. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ "ಕರ್ನಾಟಕ ವಿಕಾಸ" ಗ್ರಾಅಪಂ.ರಾಜ್ ಇಲಾಖೆ, ಬೆಂಗಳೂರು.
23. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾಅಪಂರಾ ಇಲಾಖೆ (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು).
24. ರಾಜ್ಯ ಪತ್ರಾಗಾರ ಇಲಾಖೆ (ದರ ಪ್ರತಿ ಶಾಖೆ)
25. ಗ್ರಾ.ಅ.ಪಂ.ರಾಜ್ ಇಲಾಖೆ ಮಾಹಿತಿ ಕೇಂದ್ರ – 10ಪ್ರತಿಗಳು.
26. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

## ಅನುಬಂಧ

## ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 36 ಗ್ರಾನೀಸ (5) 2014 ದಿನಾಂಕ: 26.02.2014ರ ಲಗತ್ತು

(ರೂ.ಲಕ್ಷಗಳಲ್ಲಿ)

| ಕ್ರ ಸಂ | ಜಿಲ್ಲೆ | ತಾಲ್ಲೂಕು | ಯೋಜನೆ | ಆವರಿಸಲ್ಪಡುವ ಜನವಸತಿಗಳು | ಅಂದಾಜು ಮೊತ್ತ (O&M ವೆಚ್ಚ ಸೇರಿದಂತೆ) |
|---|---|---|---|---|---|
| 1 | ವಿಜಾಪುರ | ಸಿಂದಗಿ | ಸಿಂದಗಿ ತಾಲ್ಲೂಕಿನ ಕನ್ನೊಳ್ಳಿ ಮತ್ತು ಇತರೆ 10 ಗ್ರಾಮಗಳ ಕುಡಿಯುವ ನೀರು ಸರಬರಾಜು ಯೋಜನೆ | 11 | 1882.70 |
| 2 | ವಿಜಾಪುರ | ಬಸವನ ಬಾಗೇವಾಡಿ | ಬಸವನ ಬಾಗೇವಾಡಿ ತಾಲ್ಲೂಕಿನ ಹೆಬಾಲ್ ಮತ್ತು ಇತರೆ 11 ಗ್ರಾಮಗಳ ಕುಡಿಯುವ ನೀರು ಸರಬರಾಜು ಯೋಜನೆ | 12 | 1725.00 |
| 3 | ವಿಜಾಪುರ | ಬಸವನ ಬಾಗೇವಾಡಿ | ಬಸವನ ಬಾಗೇವಾಡಿ ತಾಲ್ಲೂಕಿನ ಇಂಗಳೇಶ್ವರ ಮತ್ತು ಇತರೆ 40 ಗ್ರಾಮಗಳ ಕುಡಿಯುವ ನೀರು ಸರಬರಾಜು ಯೋಜನೆ | 41 | 6408.18 |
| 4 | ವಿಜಾಪುರ | ಇಂಡಿ | ಇಂಡಿ ತಾಲ್ಲೂಕಿನ ಬುಯ್ಯಾರ್ ಮತ್ತು ಇತರೆ 11 ಗ್ರಾಮಗಳ ಕುಡಿಯುವ ನೀರು ಸರಬರಾಜು ಯೋಜನೆ | 12 | 3158.24 |
| 5 | ವಿಜಾಪುರ | ಸಿಂದಗಿ | ಸಿಂದಗಿ ತಾಲ್ಲೂಕಿನ ಮೊರಟಗಿ ಮತ್ತು ಇತರೆ 15 ಗ್ರಾಮಗಳ ಕುಡಿಯುವ ನೀರು ಸರಬರಾಜು ಯೋಜನೆ | 16 | 1940.00 |
| 6 | ಬಾಗಲಕೋಟೆ | ಹುನಗುಂದ | ಹುನಗುಂದ ತಾಲ್ಲೂಕಿನ ಇಲ್ಕಲ್ ಮತ್ತು ಇತರೆ 17 ಗ್ರಾಮಗಳ ಕುಡಿಯುವ ನೀರು ಸರಬರಾಜು ಯೋಜನೆ | 18 | 3505.00 |
| 7 | ಬಾಗಲಕೋಟೆ | ಬೀಳಗಿ | ಬೀಳಗಿ ತಾಲ್ಲೂಕಿನ ಮುಂಡಗನೂರು ಮತ್ತು ಇತರೆ 07 ಗ್ರಾಮಗಳ ಕುಡಿಯುವ ನೀರು ಸರಬರಾಜು ಯೋಜನೆ. | 8 | 1572.00 |
| 8 | ರಾಯಚೂರು | ಲಿಂಗಸುಗೂರು | ಲಿಂಗಸುಗೂರು ತಾಲ್ಲೂಕಿನ ಹಣಗಿ ಮತ್ತು ಇತರೆ 8 ಗ್ರಾಮಗಳ ಕುಡಿಯುವ ನೀರು ಸರಬರಾಜು ಯೋಜನೆ | 9 | 1000.00 |
| 9 | ರಾಯಚೂರು | ದೇವದುರ್ಗ | ದೇವದುರ್ಗ ತಾಲ್ಲೂಕಿನ ಸಜ್ಜನಮರಡಿ ಮತ್ತು ಇತರೆ 10 ಗ್ರಾಮಗಳ ಕುಡಿಯುವ ನೀರು ಸರಬರಾಜು ಯೋಜನೆ | 11 | 1000.00 |
| 10 | ರಾಯಚೂರು | ಮಾನ್ವಿ | ಮಾನ್ವಿ ತಾಲ್ಲೂಕಿನ ಕವಿತಾಳ್ ಮತ್ತು ಪರಾಪುರ ಗ್ರಾಮಗಳ ಕುಡಿಯುವ ನೀರು ಸರಬರಾಜು ಯೋಜನೆ | 2 | 950.00 |
| 11 | ರಾಯಚೂರು | ಲಿಂಗಸುಗೂರು | ಲಿಂಗಸುಗೂರು ತಾಲ್ಲೂಕಿನ ಹುನಕುಂಟಿ ಮತ್ತು ಇತರೆ 2 ಗ್ರಾಮಗಳ ಕುಡಿಯುವ ನೀರು ಸರಬರಾಜು ಯೋಜನೆ | 3 | 325.00 |
| 12 | ಬೆಳಗಾಂ | ಗೋಕಾಕ | ಗೋಕಾಕ ತಾಲ್ಲೂಕಿನ ರಾಜಾಪುರ್, ಕುಕ್ಕಟ್ಟಿ ಮತ್ತು ಇತರೆ 5 ಗ್ರಾಮಗಳ ಕುಡಿಯುವ ನೀರು ಸರಬರಾಜು ಯೋಜನೆ | 7 | 1250.00 |
| 13 | ಬೆಳಗಾಂ | ಗೋಕಾಕ | ಗೋಕಾಕ ತಾಲ್ಲೂಕಿನ ಬೋರಲೋಬಾಗ್ ಮತ್ತು ಇತರೆ 3 ಗ್ರಾಮಗಳ ಕುಡಿಯುವ ನೀರು ಸರಬರಾಜು ಯೋಜನೆ | 4 | 525.00 |
| 14 | ಬೆಳಗಾಂ | ಬೆಳಗಾಂ | ಬೆಳಗಾಂ ತಾಲ್ಲೂಕಿನ ಹಂದಿಗನೂರು ಮತ್ತು ಇತರೆ 19 ಗ್ರಾಮಗಳ ಕುಡಿಯುವ ನೀರು ಸರಬರಾಜು ಯೋಜನೆ | 20 | 1850.00 |
| 15 | ಬೆಳಗಾಂ | ಬೆಳಗಾಂ | ಬೆಳಗಾಂ ತಾಲ್ಲೂಕಿನ ಧರ್ಮಟ್ಟಿ ಮತ್ತು ಇತರೆ 10 ಗ್ರಾಮಗಳ ಕುಡಿಯುವ ನೀರು ಸರಬರಾಜು ಯೋಜನೆ | 11 | 695.00 |
| 16 | ದಕ್ಷಿಣ ಕನ್ನಡ | ಬಂಟ್ವಾಳ | ಬಂಟ್ವಾಳ ತಾಲ್ಲೂಕಿನ ಸರಪಾಡಿ ಮತ್ತು ಇತರೆ 79 ಗ್ರಾಮಗಳ ಕುಡಿಯುವ ನೀರು ಸರಬರಾಜು ಯೋಜನೆ | 80 | 3204.40 |
| 17 | ದಕ್ಷಿಣ ಕನ್ನಡ | ಬಂಟ್ವಾಳ | ಬಂಟ್ವಾಳ ತಾಲ್ಲೂಕಿನ ಸಂಗಬೆಟ್ಟು ಮತ್ತು ಇತರೆ 65 ಗ್ರಾಮಗಳ ಕುಡಿಯುವ ನೀರು ಸರಬರಾಜು ಯೋಜನೆ | 66 | 2901.83 |
| 18 | ದಕ್ಷಿಣ ಕನ್ನಡ | ಬಂಟ್ವಾಳ | ಬಂಟ್ವಾಳ ತಾಲ್ಲೂಕಿನ ಮಾಣಿ ಮತ್ತು ಇತರೆ 67 ಗ್ರಾಮಗಳ ಕುಡಿಯುವ ನೀರು ಸರಬರಾಜು ಯೋಜನೆ | 68 | 1646.70 |
| 19 | ದಕ್ಷಿಣ ಕನ್ನಡ | ಮಂಗಳೂರು | ಮಂಗಳೂರು ತಾಲ್ಲೂಕಿನ ಮುಚ್ಚೂರು ಮತ್ತು ಇತರೆ 10 (60 ಜನವಸತಿಗಳು) ಗ್ರಾಮಗಳ ಕುಡಿಯುವ ನೀರು ಸರಬರಾಜು ಯೋಜನೆ | 61 | 2450.00 |
| 20 | ದಾವಣಗೆರೆ | ಹೊನ್ನಾಳಿ | ಹೊನ್ನಾಳಿ ತಾಲ್ಲೂಕಿನ ಹಿರೇಗೋಣಿಗೆರೆ ಮತ್ತು ಇತರೆ 8 ಗ್ರಾಮಗಳ ಕುಡಿಯುವ ನೀರು ಸರಬರಾಜು ಯೋಜನೆ | 9 | 775.75 |
| 21 | ಗುಲ್ಬರ್ಗ | ಚಿಂಚೋಳಿ | ಚಿಂಚೋಳಿ ತಾಲ್ಲೂಕಿನ ಐನಾಪುರ ಮತ್ತು ಇತರೆ 8 ಗ್ರಾಮಗಳ ಕುಡಿಯುವ ನೀರು ಸರಬರಾಜು ಯೋಜನೆ | 9 | 540.00 |
| 22 | ಗುಲ್ಬರ್ಗ | ಚಿಂಚೋಳಿ | ಚಿಂಚೋಳಿ ತಾಲ್ಲೂಕಿನ ಗಡಿಲಿಂಗದಳ್ಳಿ ಮತ್ತು ಇತರೆ 7 ಗ್ರಾಮಗಳ ಕುಡಿಯುವ ನೀರು ಸರಬರಾಜು ಯೋಜನೆ | 8 | 400.00 |

| | | | | | |
|---|---|---|---|---|---|
| 23 | ಮಂಡ್ಯ | ಮದ್ದೂರು | ಮದ್ದೂರು ತಾಲ್ಲೂಕಿನ ಕೊಪ್ಪ ಮತ್ತು ಇತರೆ 49 ಗ್ರಾಮಗಳ ಕುಡಿಯುವ ನೀರು ಸರಬರಾಜು ಯೋಜನೆ | 50 | 1950.00 |
| 24 | ಮಂಡ್ಯ | ಮದ್ದೂರು | ಮದ್ದೂರು ತಾಲ್ಲೂಕಿನ ಬೆಸಗರಹಳ್ಳಿ ಮತ್ತು ಇತರೆ 37 ಗ್ರಾಮಗಳ ಕುಡಿಯುವ ನೀರು ಸರಬರಾಜು ಯೋಜನೆ | 38 | 2465.00 |
| 25 | ಮಂಡ್ಯ | ಮದ್ದೂರು | ಮದ್ದೂರು ತಾಲ್ಲೂಕಿನ [illegible] & [illegible] ಮತ್ತು ಇತರೆ 53 ಗ್ರಾಮಗಳ ಕುಡಿಯುವ ನೀರು ಸರಬರಾಜು ಯೋಜನೆ | 55 | 3265.00 |
| 26 | ಮೈಸೂರು | ಪಿರಿಯಾಪಟ್ಟಣ | ಪಿರಿಯಾಪಟ್ಟಣ ತಾಲ್ಲೂಕಿನ ಕಣಗಾಲು ಮತ್ತು ಇತರೆ 15 ಗ್ರಾಮಗಳ ಕುಡಿಯುವ ನೀರು ಸರಬರಾಜು ಯೋಜನೆ | 16 | 964.14 |
| 27 | ಮೈಸೂರು | ಟಿ.ನರಸೀಪುರ | ಟಿ.ನರಸೀಪುರ ತಾಲ್ಲೂಕಿನ ಟಿ. ಬೆಟ್ಟಹಳ್ಳಿ ಮತ್ತು ಇತರೆ 16 ಗ್ರಾಮಗಳ ಕುಡಿಯುವ ನೀರು ಸರಬರಾಜು ಯೋಜನೆ | 17 | 947.64 |
| 28 | ಮೈಸೂರು | ನಂಜನಗೂಡು | ನಂಜನಗೂಡು ತಾಲ್ಲೂಕಿನ ಹಲ್ಲರೆ ಮತ್ತು ಇತರೆ 123 ಗ್ರಾಮಗಳ ಕುಡಿಯುವ ನೀರು ಸರಬರಾಜು ಯೋಜನೆ | 124 | 9191.37 |
| 29 | ಉಡುಪಿ | ಕುಂದಾಪುರ | ಕುಂದಾಪುರ ತಾಲ್ಲೂಕಿನ ಯಡಮೊಗೆ, ಬೈಂದೂರು, ಶಿರೂರು & ಪಡುವರಿ ಗ್ರಾಮ ಪಂಚಾಯತ್‌ನ 77 ಗ್ರಾಮಗಳ ಕುಡಿಯುವ ನೀರು ಸರಬರಾಜು ಯೋಜನೆ | 77 | 3000.00 |
| 30 | ಉಡುಪಿ | ಕುಂದಾಪುರ | ಕುಂದಾಪುರ ತಾಲ್ಲೂಕಿನ ನಾಡಾ ಗ್ರಾಮ ಪಂಚಾಯತ್‌ನ ನಾಡಾ, ಸೇನಾಪುರ, ಬಡಾಕೆರೆ ಮತ್ತು ಹಡವು 29 ಗ್ರಾಮಗಳ ಕುಡಿಯುವ ನೀರು ಸರಬರಾಜು ಯೋಜನೆ | 29 | 1050.00 |
| | | | ಒಟ್ಟು | 892 | 61537.95 |

(ರಾಮಕೃಷ್ಣ)
ಸರ್ಕಾರದ ಉಪ ಕಾರ್ಯದರ್ಶಿ(ಗ್ರಾನೀಸ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.